ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಸೇತುವೆ ನಿರ್ಮಾಣದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

165 (297) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಮದ್ದೂರು-ಕೊಪ್ಪ ಮುಖ್ಯ ರಸ್ತೆಯಿಂದ ಡಿ, ಹೊಸಹಳ್ಳಿ ಮಾರ್ಗವಾಗಿ ಬಿದರಕೋಟೆ ಸೇರುವ ರಸ್ತೆಗೆ ಲೆಕ್ಕ ಶೀರ್ಷಿಕೆ 5054 ಅಡಿಯಲ್ಲಿ ಡಾಂಬರೀಕರಣ/ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ರಸ್ತೆಗೆ ಡಾಂಬರೀಕರಣ/ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಡಿ.ಹೊಸಹಳ್ಳಿಯಲ್ಲಿ ಎರಡು ಸೇತುವೆಗಳನ್ನು ನಿರ್ಮಿಸದಿರುವುದರಿಂದ ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸೇತುವೆಗಳನ್ನು ಯಾವಾಗ ನಿರ್ಮಿಸಲಾಗುವುದು;

(ಇ) ಸದರಿ ರಸ್ತೆಗೆ ಡಾಂಬರೀಕರಣ/ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಗ್ರಾಮದ ಪರಿಮಿತಿಯಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಚರಂಡಿಯನ್ನು ನಿರ್ಮಿಸದಿರುವುದರಿಂದ ಕೊಳಚೆ ನೀರು ರಸ್ತೆಗೆ ಬಂದು ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ಚರಂಡಿಗಳನ್ನು ನಿರ್ಮಿಸಲಾಗುವುದು ? (ಮಾಹಿತಿ ನೀಡುವುದು)